ನಕ್ಷೆಯನ್ನು ಕಳುಹಿಸಿ ದಿನಾಂಕ 31-10-1989ರಂದು ಪತ್ರ ಬರೆಯಲಾಗಿದೆ. ಈ ಬಗ್ಗೆ ಅನೇಕ ಬಾರಿ ಜ್ಞಾಪಿಸಿದ್ದರೂ ಅವರಿಂದ ಯಾವುದೇ ಪ್ರತಿಕ್ರಿಯೆ ಬಂದಿರುವುದಿಲ್ಲ. ಮಹಾರಾಷ್ಟ್ರ ಸರ್ಕಾರದಿಂದ ಈ ಬಗ್ಗೆ ಪ್ರತಿಕ್ರಿಯೆ ಬಂದನಂತರ ಮುಂದಿನ ಕ್ರಮ ಕೈಗೊಳ್ಳಲಾಗುವುದು.

6. ಕೊಲ್ಲಿ ರಾಷ್ಟ್ರಗಳಿಗೆ ಮರಳಲಿಚ್ಚಿಸುವ ಉದ್ಯೋಗಿಗಳಿಗೆ ಅನುಕೂಲ ಕಲ್ಪಿಸುವುದು.

ಶ್ರೀ ಪಿ. ಬಸವರಾಜ (ಬ್ರಹ್ಮಾವರ): ಹಿಂದೆ ಕೊಲ್ಲಿ ರಾಷ್ಟ್ರಗಳಲ್ಲಿ ಉದ್ಯೋಗಿಗಳಾಗಿ ಅಲ್ಲಿನ ಅಶಾಂತಿಯ ಪರಿಸ್ಥಿತಿಯಿಂದ ತಾಯ್ನಾಡಿಗೆ ಮರಳಿದ ಕರ್ನಾಟಕ ವಿಶೇಷತೆ. ದಕ್ಷಿಣ ಕನ್ನಡದ ಜಿಲ್ಲೆಯ ಜನರು ಈಗ ಕೊಲ್ಲಿ ಬಿಕ್ಕಟ್ಟು ನಿವಾರಣೆಯಾಗಿದ್ದರ ಹಿನ್ನೆಲೆಯಲ್ಲಿ ಮತ್ತೊಮ್ಮೆ ಹಿಂದೆ ಸೇವೆ ಸಲ್ಲಿಸುತ್ತಿದ್ದ ಕೊಲ್ಲಿ ರಾಷ್ಟ್ರಗಳಿಗೆ ಮರಳಲು ಮತ್ತೊಮ್ಮೆ ಹಿಂದೆ ಸೇವೆ ಸಲ್ಲಿಸುತ್ತಿದ್ದ ಕೊಲ್ಲಿ ರಾಷ್ಟ್ರಗಳಿಗೆ ಮರಳಲು ಇಚ್ಚಿಪಡುವವರಾಗಿದ್ದಾರೆ. ಈ ರೀತಿಯ ಉತ್ಸಾಹಿಗಳು ಬಹು ಸಂಖ್ಯೆಯಲ್ಲಿರುತ್ತಿದ್ದು ಕೇರಳ ರಾಜ್ಯದಲ್ಲಿ ತೆರೆದಂತೆ ಕರ್ನಾಟಕದಲ್ಲೂ ಕೂಡ ಸಚಿವಾಲಯ ಮಟ್ಟದಲ್ಲಿ ಒಂದು ವಿಶೇಷ ಕೌಂಟರನ್ನು ತೆರೆಯಿಸಿ ಈ ರೀತಿ ಕೊಲ್ಲಿ ರಾಷ್ಟ್ರಗಳಲ್ಲಿ ವಾಪಸ್ಸು ಸೇವೆ ಸಲ್ಲಿಸಲು ಉತ್ಸುಕರಾಗಿ ಹೋಗುವ ಜನರ ನೋಂದಣಿ ಮಾಡಿಕೊಂಡು ಅವರಿಗೆ ರಾಜ್ಯ ಸರ್ಕಾರದ ವತಿಯಿಂದ ಅನುಕೂಲ ಕಲ್ಪಿಸಿ ಕೊಡಬೇಕೆಂದು ಮತ್ತು ಪಾಸ್‌ಪೋರ್ಟ್ ಅಧಿಕಾರಿಗಳಿಗೆ ಈ ರೀತಿಯ ಜನರ ಪಾಸ್‌ಪೋರ್ಟ್‌ಗಳನ್ನು ಯಾವುದೇ ಅಡೆತಡೆ ಇಲ್ಲದೆ ನವೀಕರಿಸುವುದಕ್ಕೆ ನಿರ್ದೇಶಿಸಲು ಕೇಂದ್ರ ಸರ್ಕಾರವನ್ನು ಕೋರಬೇಕೆಂದು ಒತ್ತಾಯಿಸುತ್ತೇನೆ.

ಶ್ರೀ ಧರ್ಮಸಿಂಗ್ (ಗೃಹ ಸಚಿವರು): ಮಾನ್ಯ ಅಧ್ಯಕ್ಷರೇ, ತಮ್ಮ ಅನುಮತಿ ಪಡೆದು ನಾನು ಈ ಕಳಗಿನ ಹೇಳಿಕೆಯನ್ನು ನೀಡಬಯಸುತ್ತೇನೆ.

ಕೊಲ್ಲಿ ರಾಷ್ಟ್ರಗಳಿಂದ ಇದುವರೆಗೆ 7,324 ಜನರು ರಾಜ್ಯಕ್ಕೆ ಹಿಂತಿರುಗಿದ್ದು ಅವರಲ್ಲಿ 5,481 ಜನರು ದಕ್ಷಣ ಕನ್ನಡ ಜಿಲ್ಲೆಗೆ ಸೇರಿದವರಾಗಿರುತ್ತಾರೆ. ಅವರು ಭಾರತಕ್ಕೆ ಮರಳಿ ಬಂದಾಗ ಅವ್ವುಗಳ ರಾಜ್ಯದಲ್ಲಿನ ತಮ್ಮ ಸ್ವಂತ ಸ್ಥಳಗಳಿಗೆ ತಲುಪುವವರಿಗೆ ಉಚಿತವಾಗಿ ಸಾರಿಗೆ ಸೌಲಭ್ಯಗಳನ್ನು ರಾಜ್ಯ ಸರ್ಕಾರವು ಒದಗಿಸಿರುತ್ತದೆ. ಅದಕ್ಕಾಗಿ ಸುಮಾರು ರೂ. 5 ಲಕ್ಷಗಳಷ್ಟು ಖರ್ಚಾಗಿರುತ್ತದೆ.

ಇವರಲ್ಲಿ ಹೆಚ್ಚಿನ ಜನರು ಮತ್ತು ಕೊಲ್ಲಿ ರಾಷ್ಟ್ರಗಳಿಗೆ ಹಿಂದಿರುಗಲು ಇಚ್ಚಿಸಿದಲ್ಲಿ ರಾಜ್ಯ ಸರ್ಕಾರವು ಅವರ ಅನುಕೂಲಕ್ಕಾಗಿ ಒಂದು ವಿಶೇಷ ಕೌಂಟರನ್ನು ತೆರೆಯುವುದನ್ನು ಪರಿಶೀಲಿಸಿ ಅವರ ಪಾಸ್‌ಪೋರ್ಟ್‌ಗಳನ್ನು ಆದಷ್ಟು ಬೇಗ ನವೀಕರಿಸಲು ಕ್ರಮಕ್ಕೆಗೊಳ್ಳುವಂತೆ ಕೇಂದ್ರ ಸರ್ಕಾರವನ್ನು ಕೋರಲಾಗುವುದು.

7. ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಲ್ಲಿ ನಿವೇಶನಕ್ಕಾಗಿ ಹಣ ನೀಡಿದವರಿಗೆ ಕೂಡಲೇ ಹಣ ಅಥವಾ ನಿವೇಶನ ನೀಡುವುದು.

ಶ್ರೀ ಕೆ. ಲಕ್ಕಪ್ಪ (ಕುಣಿಗಲ್) : ಎರಡು ವರ್ಷಗಳ ಹಿಂದೆ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದವರು ನಿವೇಶನಕ್ಕಾಗಿ ಅರ್ಜಿ ಕರೆದಿದ್ದು ಸಾವಿರಾರು ಜನ ನಿವೇಶನವಿಲ್ಲದವರು ತಮ್ಮ ಅರ್ಜಿ ಹಾಗೂ ಅದರೊಂದಿಗೆ 2000 ರಿಂದ 8000 ರೂಪಾಯಿಗಳವರೆಗೆ ಸಲ್ಲಿಸಿರುತ್ತಾರೆ. ಕಳೆದ ಎರಡು ವರ್ಷಗಳಿಂದ ಹಲವಾರು ಕಾರಣಗಳಿಂದ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದವರು ನಿವೇಶನಗಳನ್ನು ಹಂಚಲು ಸಾಧ್ಯವಾಗಿರುವುದಿಲ್ಲ. ಈ ಜನರು ಹಣವನ್ನು ಸಾಲ ಮಾಡಿ ತಂದು, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದವರು ಕೂಡಲೇ ನಿವೇಶನಗಳನ್ನು ಮಂಜೂರು ಮಾಡಬೇಕು ಇಲ್ಲವೇ ಅರ್ಜಿದಾರರಿಂದ ಪಡೆದುಕೊಂಡಿರುವ ಠೇವಣಿಯನ್ನು ವಾಪಸ್ಸು ಮಾಡಬೇಕು. ಈ ಬಗ್ಗೆ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರಕ್ಕೆ ಸೂಕ್ತ ಆದೇಶ ನೀಡಬೇಕೆಂದು ಸನ್ಮಾನ್ಯ ಮುಖ್ಯ ಮಂತ್ರಿಗಳವರನ್ನು ಕೋರುತ್ತೇನೆ.

ಶ್ರೀ ಎಂ. ವೀರಪ್ಪ ಮೊಯಿಲಿ (ವಿದ್ಯಾ ಸಚಿವರು): ಮಾನ್ಯ ಅಧ್ಯಕ್ಷರೇ ಮಾನ್ಯ ಶಾಸಕರು ಎತ್ತಿದ ವಿಚಾರವನ್ನು ಮುಖ್ಯಮಂತ್ರಿಯವರ ಗಮನಕ್ಕೆ ತಂದು ಉತ್ತರವನ್ನು ಪ್ರತ್ಯೇಕವಾಗಿ ಒದಗಿಸಲಾಗುವುದು.

8. ಸರ್ಕಾರಿ ಪದವಿ ಪೂರ್ವ ಕಾಲೇಜಿಗೆ ಕೊಠಡಿಗಳ ಕೊರತೆ ಇರುವುದು.

ಶ್ರೀ ಸಿ.ಆರ್ ಸಗೀರ್ ಅಹಮದ್ (ಚಿಕ್ಕಮಗಳೂರು): ಚಿಕ್ಕಮಗಳೂರು ನಗರದಲ್ಲಿ ದಿನೇದಿನೇ ಬೆಳೆಯುತ್ತಿರುವ ಜನಸಂಖ್ಯೆಯಂತೆ ವಿದ್ಯಾರ್ಥಿ ವಿದ್ಯಾರ್ಥಿನಿಯರ ಸಂಖ್ಯೆ ಹೆಚ್ಚುತ್ತಿದ್ದು ಪಟ್ಟಣದಲ್ಲಿರುವ ಸರ್ಕಾರಿ ಪದವೀಪೂರ್ವ ಕಾಲೇಜು ಮತ್ತು ಸರ್ಕಾರಿ ಲಾಲ್‌ಬಹದ್ದೂರ್ ಶಾಸ್ತ್ರಿ ಪದವಿಪೂರ್ವ ಕಾಲೇಜಿಗೆ ಶಾಲಾ ಕೊಠಡಿಗಳ ಕೊರತೆ ಇದ್ದು ಕಳೆದ ಹತ್ತು ವರ್ಷಗಳಿಂದ ಯಾವುದೇ ಕೊಠಡಿ ನಿರ್ಮಾಣ ಆಗಿರುವುದಿಲ್ಲ. ಈ ಬೇಡಿಕೆ ಈಡೇರಿಸಲು ಸರ್ಕಾರಕ್ಕೆ ಮನವಿಯನ್ನು ಸಲ್ಲಿಸಿರುತ್ತೇನೆ. ಈ ಕೊಠಡಿಗಳ ನಿರ್ಮಾಣಕ್ಕೆ ಸರ್ಕಾರದ ಕ್ರಮದ ಬಗ್ಗೆ ಉತ್ತರವನ್ನು ನಿರೀಕ್ಷಿಸುತ್ತೇನೆ.

ಶ್ರೀ ಎಂ. ವೀರಪ್ಪ ಮೊಯಿಲಿ (ವಿದ್ಯಾ ಸಚಿವರು): ಮಾನ್ಯ ಅಧ್ಯಕ್ಷರೆ, ಚಿಕ್ಕಮಗಳೂರು ನಗರದಲ್ಲಿ ಎರಡು ಸರ್ಕಾರಿ ಸಂಯುಕ್ತ ಕಿರಿಯ ಕಾಲೇಜುಗಳು ಸ್ಥಾಪಿತವಾಗಿವೆ. ಸರ್ಕಾರಿ ಕಿರಿಯ ಕಾಲೇಜು ಚಿಕ್ಕಮಗಳೂರು ಇಲ್ಲಿ 650 ಪ್ರೌಢ ಶಾಲಾ ವಿದ್ಯಾರ್ಥಿಗಳು ಮತ್ತು 500 ಕಿರಿಯ ಕಾಲೇಜು ವಿದ್ಯಾರ್ಥಿಗಳು ಇದ್ದಾರೆ. ಈ ಕಾಲೇಜಿನಲ್ಲಿ ಹಾಲಿ ಇರುವ ಕೊಠಡಿಗಳ ಸಂಖ್ಯೆ 18. ಇನ್ನೂ ಹೆಚ್ಚುವರಿ 10 ಕೊಠಡಿಗಳು ಬೇಕಾಗಿದೆ ಎಂದು ಅಂದಾಜು ಮಾಡಲಾಗಿದೆ.

1990-91ನೇ ಸಾಲಿನಲ್ಲಿ ಚಿಕ್ಕಮಗಳೂರಿಗೆ ಇನ್ನೊಂದು ಸರ್ಕಾರಿ ಸಂಯುಕ್ತ ಕಿರಿಯ ಕಾಲೇಜು ಮಂಜೂರಾಗಿದೆ. ಇಲ್ಲಿ ಪ್ರೌಢಶಾಲಾ ವಿಭಾಗದಲ್ಲಿ 352 ವಿದ್ಯಾರ್ಥಿಗಳು ಮತ್ತು ಕಿರಿಯ ಕಾಲೇಜು ವಿಭಾಗದಲ್ಲಿ 30 ವಿದ್ಯಾರ್ಥಿಗಳು ಇರುತ್ತಾರೆ. ಈ ಕಾಲೇಜಿನಲ್ಲಿ ಹಾಲಿ ಇರುವ ಕೊಠಡಿಗಳ ಸಂಖ್ಯೆ 10. ಇದಕ್ಕೂ ಇನ್ನು ಮುಂದೆ ಹೆಚ್ಚುವರಿ ಕೊಠಡಿಗಳು ಬೇಕಾಗಬಹುದೆಂದು ಅಂದಾಜು ಮಾಡಲಾಗಿದೆ.

ರಾಜ್ಯದಲ್ಲಿರುವ ಎಲ್ಲಾ ಸಂಯುಕ್ತ ಕಾಲೇಜುಗಳ ಹಿಂದಿನ ಪ್ರೌಢಶಾಲಾ ಕಟ್ಟಡಗಳಲ್ಲೇ ಸ್ಥಾಪಿತವಾಗಿ ನಡೆಯುತ್ತಿವೆ. ಈ ಕಾಲೇಜುಗಳಿಗೆ ಒಟ್ಟು 987 ಕೊಠಡಿಗಳ ಅವಶ್ಯಕತೆ ಇದ್ದು, ಇದಕ್ಕೆ 5 ಕೋಟಿ ರೂಪಾಯಿಗಳು ಬೇಕಾಗುತ್ತದೆ. ಈ ಎಲ್ಲಾ ಕಾಲೇಜುಗಳಿಗೆ ಹಂತಹಂತವಾಗಿ ಶಾಲಾ ಕೊಠಡಿಗಳನ್ನು ನಿರ್ಮಿಸುವ ಕಾರ್ಯಕ್ರಮ ಜಾರಿಯಲ್ಲಿದ್ದು, 1990-91ರಲ್ಲಿ ಇದರ ಬಾಬ್ತು 37.70 ಲಕ್ಷ ರೂಪಾಯಿಗಳನ್ನು ಯೋಜನಾ ಆಯವ್ಯಯದಲ್ಲಿ ಒದಗಿಸಲಾಗಿದೆ. ಹಾಗೆಯೇ ಮುಂದಿರುವ ಆರ್ಥಿಕ ವರ್ಷದಲ್ಲಿ 76.00 ಲಕ್ಷ ರೂಪಾಯಿಗಳನ್ನು ಒದಗಿಸಲಾಗಿದೆ.

ಚಿಕ್ಕಮಗಳೂರಿನ ಕಾಲೇಜುಗಳಿಗೆ 91-92ರ ಸಾಲಿನಲ್ಲಿ ಶಿಕ್ಷಣ ಇಲಾಖೆಯ ಯೋಜನಾ ಆಯವ್ಯಯದ ಒಟ್ಟಾರೆ ಉಳಿತಾಯದಲ್ಲಿ ಅಧಿಕ ಕೊಠಡಿಗಳನ್ನು ನಿರ್ಮಿಸುವ ಬಗ್ಗೆ ಪರಿಶೀಲಿಸಲಾಗುವುದು.

9. ಸ್ವಯಂ ಸೇವಾ ಸಂಸ್ಥೆಗಳಲ್ಲಿ ದುಡಿಯುತ್ತಿರುವ ಅಂಗವಿಕಲರಿಗೆ ವೇತನ ನೀಡುತ್ತಿರುವುದು.

ಶ್ರೀ ಬ್ಲೇಸಿಯಸ್ ಎಂ. ಡಿಸೋಜ (ಮಂಗಳೂರು): ಮಹಿಳೆಯರ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಅನುದಾನ ಪಡೆಯುತ್ತಿರುವ ಅಂಗವಿಕಲರ ಕಲ್ಯಾಣಕ್ಕಾಗಿ ದುಡಿಯುತ್ತಿರುವ ಸ್ವಯಂಸೇವಾ ಸಂಸ್ಥೆಗಳಿಗೆ 1982ರ ಅನುದಾನ ಸಂಹಿತೆ (ಗ್ರಾಂಟ್-ಇನ್-ಏಡ್ ಕೋಡ್) ಪ್ರಕಾರ ಅವರ ಸಿಬ್ಬಂದಿಗಳಿಗೆ ಶಿಕ್ಷಣ ಇಲಾಖೆಯ ಸಿಬ್ಬಂದಿಗಳಿಗೆ ನೀಡುವ ವೇತನ ಅನ್ವಯವಾಗುತ್ತದೆ. ಶಿಕ್ಷಣ ಇಲಾಖೆಯ ನೌಕರರಿಗೆ